KARNATAK UNIVERSITY, DHARWAD
ACADEMIC (S&T) SECTION
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
ವಿದ್ಯಾಮಂಡಳ (ಎಸ್&ಟಿ) ವಿಭಾಗ

Tele: 0836-2215224
e-mail: academic.st@kud.ac.in
Pavate Nagar,Dharwad-580003
ಪಾವಟೆ ನಗರ, ಧಾರವಾಡ – 580003

NAAC Accredited
'A' Grade 2014

website: kud.ac.in

No. KU/Aca(S&T)/RPH-378/ PG/CE/2020-21/ 1079

Date: 21 APR 2021

## ಸುತ್ತೋಲೆ

ವಿಷಯ: ಕೋವಿಡ್–19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ದಿನಾಂಕ 21.04.2021 ರಿಂದ 04.05.2021ರ ವರೆಗೆ ಆಫ್‌ಲೈನ್ ತರಗತಿಗಳನ್ನು ಸ್ಥಗಿತಗೊಳಿಸಿ ತರಗತಿಗಳನ್ನು ಮುಚ್ಚುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ RD 158 TNR 2020 ದಿ. 20.04.2021.
2. ಮಾನ್ಯ ಕುಲಪತಿಗಳ ಆದೇಶ ದಿನಾಂಕ 21.04.2021.

-----

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಸ್ನಾತಕ / ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು / ಸ್ನಾತಕೋತ್ತರ ಕೇಂದ್ರ ಹಾವೇರಿ / ಗದಗ / ಕಾರವಾರ, ಘಟಕ ಮತ್ತು ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರು ಮತ್ತು ಕ.ವಿ.ವಿ. ಪ್ರಾಥಮಿಕ / ಪ್ರೌಢ ಶಾಲೆಯ ಮುಖ್ಯೋಪಾಧ್ಯರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಉಲ್ಲೇಖ 01ರ ಸರ್ಕಾರದ ಆದೇಶದ ಅನುಬಂಧ–1 ರಲ್ಲಿ ಕೋವಿಡ್–19 ಸಾಂಕ್ರಾಮಿಕ ರೋಗದ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದು ಅದರಲ್ಲಿ ದಿನಾಂಕ 21.04.2021 ರಿಂದ 04.05.2021ರ ವರೆಗೆ "Schools, Colleges, Educational / training / coaching institutions etc., will remain closed. Online / distance learning shall continue to be permitted and shall be encouraged" ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ ದಿನಾಂಕ 21.04.2021 ರಿಂದ 04.05.2021ರ ವರೆಗೆ ಆಫ್‌ಲೈನ ತರಗತಿಗಳನ್ನು ಸ್ಥಗಿತಗೊಳಿಸಿ ತರಗತಿಗಳನ್ನು ಮುಚ್ಚಲು ಸೂಚಿಸಲಾಗಿದೆ. ಬದಲಾಗಿ ಅಗತ್ಯವಿರುವ ಕಡೆಗಳಲ್ಲಿ ತರಗತಿಗಳನ್ನು ಆನ್‌ಲೈನ್ ಮುಖಾಂತರ ನಡೆಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಈ ಮೂಲಕ ತಿಳಿಯಪಡಿಸಿದೆ.

ಮುಂದುವರೆದು, ಸರ್ಕಾರ ನೀಡಿರುವ ಮಾರ್ಗಸೂಚಿಗಳನ್ನು ಇದರೊಂದಿಗೆ ಲಗತ್ತಿಸಿ ನೀಡುತ್ತಾ ಇದರಲ್ಲಿರುವ ಇತರೆ ಎಲ್ಲಾ ಅಂಶಗಳನ್ನು ಅನುಸರಿಸಲು ಅಗತ್ಯ ಕ್ರಮ ವಹಿಸಬೇಕೆಂತಲೂ ಹಾಗೂ ಈ ಮಾಹಿತಿಯನ್ನು ಸಂಬಂಧಪಟ್ಟ ಎಲ್ಲರ ಗಮನಕ್ಕೆ ತರಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂತಲೂ ಈ ಮೂಲಕ ಸೂಚಿಸಿದೆ.

ಅಡಕ: ಮೇಲಿನಂತೆ.

21/04/21
(ಡಾ. ಹನುಮಂತಪ್ಪ ಕೆ.ಟಿ)
ಕುಲಸಚಿವರು

ಗೆ,

1. ಕುಲಸಚಿವರು (ಮೌಲ್ಯಮಾಪನ), ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2. ಎಲ್ಲ ನಿಖಾಯದ ಡೀನರುಗಳು / ಮುಖ್ಯಸ್ಥರು, ಎಲ್ಲ ಸ್ನಾತಕೋತ್ತರ ವಿಭಾಗ, ಕ.ವಿ.ವಿ. ಧಾರವಾಡ.
3. ವಿತ್ತಾಧಿಕಾರಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
4. ನಿರ್ದೇಶಕರು, ವಿದ್ಯಾರ್ಥಿ ಕಲ್ಯಾಣ ವಿಭಾಗ / ಐ.ಟಿ. ಶಾಖೆ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5. ನಿರ್ದೇಶಕರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
6. ಆಡಳಿತಾಧಿಕಾರಿಗಳು / ಸಂಯೋಜಕರು, ಕ.ವಿ.ವಿ. ಸ್ನಾತಕೋತ್ತರ ಕೇಂದ್ರ ಹಾವೇರಿ / ಗದಗ / ಕಾರವಾರ.
7. ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ / ಕ.ವಿ.ವಿ. ಪ್ರಾಥಮಿಕ / ಪ್ರೌಢ ಶಾಲೆಯ ಮುಖ್ಯೋಪಾಧ್ಯರು, ಪ್ರಾಚಾರ್ಯರುಗಳಿಗೆ.

**ಪ್ರತಿ ಮಾಹಿತಿಗಾಗಿ:**

1) ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಾರ್ಯಾಲಯ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2) ಆಪ್ತ ಕಾರ್ಯದರ್ಶಿಗಳು, ಕುಲಸಚಿವರ ಕಾರ್ಯಾಲಯ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.